ಸಿ.ಮಿಸ್. 259/2026 ಪಿಡಬ್ಲ್ಯೂ:1

ದಿನಾಂಕಃ 23.06.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ

ಇಂದು ನಾನು ನ್ಯಾಯಾಲಯಕ್ಕೆ ಸಲ್ಲಿಸಿರುವ ಸಾಕ್ಷ್ಯ ಪ್ರಮಾಣಪತ್ರದ ಎಲ್ಲಾ ವಿಚಾರಗಳು ಸತ್ಯವಾಗಿವೆ. ನಾನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ. ಈ ಕೆಳಕಂಡ ದಾಖಲಾತಿಗಳನ್ನು ಹಾಜರು ಮಾಡಿರುತ್ತೇನೆ.

ಅಲಭ್ಯ ಪ್ರಮಾಣಪತ್ರವನ್ನು ಹಾಜರು ಮಾಡಿದ್ದು ಅದನ್ನು ನಿಪಿಃ1 ಎಂದು ಗುರುತಿಸಲಾಯಿತು. ನನ್ನ ಕುಟುಂಬದ ವಂಶವೃಕ್ಷದ ನೋಟರೀ ಪ್ರಮಾಣಪತ್ರವನ್ನು ಹಾಜರು ಮಾಡಿದ್ದು ಅದನ್ನು ನಿಪಿಃ2 ಎಂದು ಗುರುತಿಸಲಾಯಿತು. ಆಧಾರ್ ಕಾರ್ಡ್ ನ ಪ್ರಮಾಣೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿಃ3 ಎಂದೂ, ಒಂದು ಪತ್ರಿಕಾ ಪ್ರಕಟಣೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿಃ 4 ಎಂದು ಗುರುತಿಸಲಾಯಿತು.

ಅರ್ಜಿಯಲ್ಲಿ ಕೇಳಿದಂತೆ ಆದೇಶ ಮಾಡುವಂತೆ ಕೇಳಿಕೊಳ್ಳುತ್ತೇನೆ.

ಪಾಟೀಸವಾಲುಃ ಎದುರುದಾರರು ಏಕಪಕ್ಷೀಯವಾದ ಕಾರಣ ಪಾಟೀಸವಾಲು ಇಲ್ಲಾ ಎಂದು ಪರಿಗಣಿಸಲಾಯಿತು.

(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೇ ಸ ಇ ಒ.,

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂ., ಚಾಮರಾಜನಗರ.